## 21. ಗ್ರಾಹಕರ ನೆರವಿಗೆ ಸಶಕ್ತ ಕಾಯ್ದೆ

ಕೇಂದ್ರ ಸರ್ಕಾರ 2019ರಲ್ಲಿ ರೂಪುಗೊಳಿಸಿ, ಅಂಗೀಕರಿಸಿದ್ದ ಗ್ರಾಹಕ ರಕ್ಷಣಾ ಕಾಯ್ದೆ ಜುಲೈ 20 ರಿಂದ ಜಾರಿಯಾಗಿದೆ. ಪೂರ್ಣರೂಪದಲ್ಲಿ ಅಲ್ಲದಿದ್ದರೂ, ಬಹುತೇಕ ಅಂಶಗಳು ಜಾರಿಯಾಗಿವೆ. ಗ್ರಾಹಕರ ಹಕ್ಕುಗಳನ್ನು ರಕ್ಷಿಸುವ ಹಿನ್ನೆಲೆಯಲ್ಲಿ ಇದು ಮೈಲು ಗಲ್ಲಾಗಬಹುದು ಎಂಬ ನಿರೀಕ್ಷೆಯಿದೆ. ಈ ಹಿನ್ನೆಲೆಯಲ್ಲಿ ಕಾಯ್ದೆಯ ಮುಖ್ಯಾಂಶಗಳು

**ಗ್ರಾಹಕ ರಕ್ಷಣಾ ಕಾಯಿದೆ 2019:** ಮೂಲ ಗ್ರಾಹಕರ ಹಿತರಕ್ಷಣಾ ಕಾಯ್ದೆ ಜಾರಿಗೆ ಬಂದಿದ್ದು, 1986ರಲ್ಲಿ ಅದನ್ನು 2019ರಲ್ಲಿ ಬದಲಾಯಿಸಲಾಯಿತು. 2019 ಜುಲೈ 8 ರಂದು ಮೊದಲು ರಾಜ್ಯ ಸಭೆಯಲ್ಲಿ ಮಂಡಿಸಲಾಯಿತು. ಆ ನಂತರ ಜುಲೈ–30ರಂದು ಲೋಕಸಭೆಯಲ್ಲಿ ಮಂಡಿಸಿ ಒಪ್ಪಿಗೆ ಪಡೆಯಲಾಯಿತು. ಆಗಸ್ಟ್ 6ರಂದು ಮತ್ತೆ ಕೇಂದ್ರ ಸಚಿವ ರಾಮ್ ವಿಲಾಸ್ ಪಾಸ್ವಾನ್ (ಗ್ರಾಹಕ ವ್ಯವಹಾರ, ಆಹಾರ ಮತ್ತು ಸಾರ್ವಜನಿಕ ವಿತರಣೆ) ಮಸೂದೆಯನ್ನು ರಾಜ್ಯಸಭೆಯಲ್ಲಿ ಮಂಡಿಸಿ ಒಪ್ಪಿಗೆ ಪಡೆದರು. ಆಗಸ್ಟ್ 9 ರಂದು ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಅಂಕಿತ ಹಾಕುವ ಮೂಲಕ ಅದು ಕಾಯ್ದೆಯಾಗಿ ಬದಲಾಯಿತು.

**ಕಾಯ್ದೆ ಒಳಗೊಂಡಿರುವ ಅಂಶಗಳು:** ಕೇಂದ್ರ ಸರ್ಕಾರ ಜಾರಿ ಮಾಡುವ ಗ್ರಾಹಕ ರಕ್ಷಣಾ ಕಾಯ್ದೆಯ ಅಂಶಗಳನ್ನು ಗುರ್ತಿಸಿದೆ. ಗ್ರಾಹಕ ರಕ್ಷಣಾ ಆಯೋಗಗಳ ರಚನೆ, ಗ್ರಾಹಕ ವಿವಾದಗಳ ನಿವಾರಣೆ ವೇದಿಕೆ ರಚನೆ, ಮಧ್ಯವರ್ತಿಗಳಾಗಿ ಕೆಲಸ ಮಾಡುವುದು ಅಥವಾ ಸಂಪರ್ಕ ಸೇತುವಾಗುವುದು ಇವೆಲ್ಲ ಒಂದು ಭಾಗ. ಒಪ್ಪಿಕೊಂಡಂತೆ ಸೇವೆ ಮತ್ತು ಉತ್ಪನ್ನ ನೀಡದಿರುವುದು, ಹಾಳಾದ ಅಥವಾ ಕಲಬೆರಕೆ ಮಾಡಿದ ಉತ್ಪನ್ನಗಳನ್ನು ತಯಾರಿಸುವುದು, ಮಾರುವುದು, ವಿತರಿಸುವುದಕ್ಕೆ ದಂಡ ವಿಧಿಸುವುದು ಇವೆಲ್ಲ ಇನ್ನೊಂದು ಭಾಗವಾಗಿವೆ.

**ಸನಿಹದ ಗ್ರಾಹಕ ಆಯೋಗಗಳಲ್ಲೇ ದೂರು:** ಗ್ರಾಹಕರಿಗಿರುವ ಒಂದು ಅಮೂಲ್ಯ ಅವಕಾಶವೆಂದರೆ ಅವರು ದೂರು ಸಲ್ಲಿಸಲು ಅಲ್ಲಿ ಇಲ್ಲಿ ಎಂದು ಅಲೆಯಬೇಕಿಲ್ಲ. ತಾವು ಎಲ್ಲಿಯೇ ವಸ್ತುಗಳನ್ನು ಖರೀದಿಸಿದ್ದರೂ ತಮ್ಮ ವಾಸ್ತವ್ಯ ತಾಣಕ್ಕೆ ಹತ್ತಿರವಾದ ಜಿಲ್ಲಾ, ರಾಜ್ಯ ಗ್ರಾಹಕ ಆಯೋಗಗಳಲ್ಲಿ ದೂರು ಸಲ್ಲಿಸಬಹುದು. ಒಂದು ವೇಳೆ ಪ್ರಕರಣ ಗ್ರಾಹಕ ಆಯೋಗಗಳಲ್ಲಿ ಇತ್ಯರ್ಥವಾಗದಿದ್ದರೆ ಅದು ಅಂತಿಮವಾಗಿ ಸರ್ವೋಚ್ಚ ನ್ಯಾಯಾಲಯದ ಮೆಟ್ಟಿಲೇರಿ ನಿರ್ಣಯವಾಗುತ್ತದೆ.

**ಕಲಬೆರಕೆ, ಕಳಪೆ ವಸ್ತುಗಳಿಗೆ 6 ತಿಂಗಳವರೆಗೆ ಜೈಲು:** ಹೊಸ ಕಾಯ್ದೆಯಲ್ಲಿ ಗ್ರಾಹಕ ನ್ಯಾಯಾಲಯಗಳಿಗೆ ಅಧಿಕಾರ ನೀಡಲಾಗಿದೆ. ಸಮಸ್ಯೆಗಳನ್ನು ಬಗೆಹರಿಸುವ, ಕಠಿಣಶಿಕ್ಷೆ ವಿಧಿಸುವ ಅವಕಾಶ ನೀಡುವ ಮೂಲಕ ವ್ಯವಸ್ಥೆಯನ್ನು ಶಕ್ತಿಪೂರ್ಣ ಮಾಡಲಾಗಿದೆ. ಒಂದು ವೇಳೆ ಉತ್ಪಾದಕರು, ಮಾರಾಟಗಾರರು, ವಿತರಕರು ಕಲಬೆರಕೆ ಮಾಡಿದ ಅಥವಾ ಹಾಳಾದ ವಸ್ತುಗಳನ್ನು ಮಾರಾಟ ಮಾಡಿದರೆ ಅಂತಹವರನ್ನು ನ್ಯಾಯಾಲಯಕ್ಕೆಳೆದು ಪರಿಹಾರ ಕೇಳುವ ಅಧಿಕಾರ ಗ್ರಾಹಕರಿಗಿದೆ. ಕಳಪೆ ವಸ್ತುಗಳನ್ನು ಬಳಸಿದ ಗ್ರಾಹಕರಿಗೆ ಹಾನಿಯಾಗದಿದ್ದರೂ ಮಾರಿದಾತನಿಗೆ 6 ತಿಂಗಳವರೆಗೆ ಬಂಧನ ಅಥವಾ ರೂ.1 ಲಕ್ಷ ದಂಡ ವಿಧಿಸಬಹುದು.

**ಗ್ರಾಹಕ ಮೃತಪಟ್ಟರೆ ಆಜೀವ ಕಾರಾಗೃಹ:** ಒಂದು ವೇಳೆ ಗ್ರಾಹಕರಿಗೆ ಹಾನಿಯಾದರೆ, ರೂ.5 ಲಕ್ಷ ದವರೆಗೆ ದಂಡ ಜೊತೆಗೆ 7 ವರ್ಷದವರೆಗೆ ಕಾರಾಗೃಹ ಶಿಕ್ಷೆಯನ್ನು ಉತ್ಪಾದಕರು/ಮಾರಾಟಗಾರರು/ ವಿತರಕರಿಗೆ ವಿಧಿಸಬಹುದು. ಆಕಸ್ಮಾತ್ ಇಂತಹ ವಸ್ತುಗಳ ಬಳಕೆಯಿಂದ ಗ್ರಾಹಕ ಸತ್ತೇ ಹೋದರೆ, ಕನಿಷ್ಠ ರೂ.10 ಲಕ್ಷ ದಂಡ ಮತ್ತು 7 ವರ್ಷ ಕಾರಾಗೃಹ ಶಿಕ್ಷೆ ವಿಧಿಸಬಹುದು. ಈ ಶಿಕ್ಷಾವಧಿಯನ್ನು ಆಜೀವ ಮಟ್ಟಕ್ಕೆ ವಿಸ್ತರಿಸುವ ಅಧಿಕಾರವೂ ಗ್ರಾಹಕ ನ್ಯಾಯಾಲಯಗಳಿಗಿದೆ.

ಆಧಾರ:ಉದಯವಾಣಿ, ದಿನಾಂಕ:03.08.2020